ಸಹಸ್ರಾರು ಬಗೆಯ ಸಸ್ಯಗಳನ್ನು ಬೆಳೆಸಿ ಅಭಿವೃದ್ಧಿ ಪಡೆಸುವ ಬಗ್ಗೆ ಆದ್ಯತೆ ನೀಡಬೇಕಾಗಿದೆ.

ಬೆಂಗಳೂರು ಡೈರಿಯಲ್ಲಿ ರೈತರಿಂದ ವಾರಕ್ಕೊಮ್ಮೆ ಹಾಲು ತೆಗೆದುಕೊಳ್ಳದಿರುವ ಬಗ್ಗೆ

360. ಶ್ರೀ ಎಂ. ವಿ. ವೆಂಕಟಪ್ಪ (ಮುಳಬಾಗಿಲು):– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಡೈರಿಯವರು ವಾರಕ್ಕೊಮ್ಮೆ ರೈತರಿಂದ ಹಾಲನ್ನು ತೆಗೆದುಕೊಳ್ಳದೆ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ವಾರದಲ್ಲಿ ಏಳು ದಿನಗಳು ಹಾಲು ತೆಗೆದುಕೊಂಡಾಗ ಹೆಚ್ಚಿಗೆ ಬಂದ ಹಾಲಿನಲ್ಲಿ ಡೈರಿ ಪ್ರಾಡಕ್ಟ್ಸ್ ತಯಾರಿಸಲು ಕಾರ್ಯಕ್ರಮ ಹಾಕಿಕೊಳ್ಳಲಾಗಿದೆಯೇ, ಹಾಗಿದ್ದಲ್ಲಿ, ಅವುಗಳಾವುವು?

ಇ) ಬೆಂಗಳೂರು ಡೈರಿಯಲ್ಲಿ ಐಸ್‌ಕ್ರೀಂ ಘಟಕವೊಂದನ್ನು ಸ್ಥಾಪಿಸಲು ಸರ್ಕಾರದ ಮುಂದೆ ಯೋಜನೆಯೇನಾದರೂ ಇದೆಯೇ, ಹಾಗಿದ್ದಲ್ಲಿ ಅದಕ್ಕೆ ತಗಲುವ ವೆಚ್ಚವೆಷ್ಟು?

ಶ್ರೀ ಬಿ. ಬಸವಲಿಂಗಪ್ಪ, (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶುಸಂಗೋಪನೆ ಸಚಿವರು):

ಅ) 1990–91ನೇ ಸಾಲಿನಲ್ಲಿ ಇದುವರೆವಿಗೂ ಬೆಂಗಳೂರು ಡೈರಿಯು ಹಾಲನ್ನು ರೈತರಿಂದ ವಾರದ ಎಲ್ಲಾ ದಿನಗಳಲ್ಲೂ ಶೇಖರಿಸುತ್ತಿದೆ.

ಆ) ಉದ್ಭವಿಸುವುದಿಲ್ಲ

ಇ) ಹೌದು ಇದಕ್ಕೆ ತಗಲುವ ವೆಚ್ಚ ಅಂದಾಜು ರೂ. 410.00 ಲಕ್ಷಗಳು.

ಅಧ್ಯಕ್ಷರು: ಮಂಡಿಸಲಾಯಿತ

ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎನ್.ಜಿ. ಹಾಲಪ್ಪ:– ಮಾನ್ಯ ಅಧ್ಯಕ್ಷರೇ, ಭದ್ರಾವತಿ ತಾಲ್ಲೂಕ್, ಹೊಳೆಹೊನ್ನೂರು ಹೋಬಳಿ, ಚಂದನಕೆರೆ ಗ್ರಾಮದ ಸರ್ವೆ ನಂ. 12ರ ಗೋಮಾಳದಲ್ಲಿ ಅಕ್ರಮ ಸಾಗುವಳಿ ಮಾಡುತ್ತಿರುವ ಬಗ್ಗೆ ಅರ್ಜಿಯನ್ನು ಒಪ್ಪಿಸುತ್ತೇನೆ.

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್: ಮಾನ್ಯ ಅಧ್ಯಕ್ಷರೇ,

ಅ) ಹುಕ್ಕೇರಿ ತಾಲ್ಲೂಕಿನ ದಡ್ಡಿಯಲ್ಲಿರುವ ಹೈಸ್ಕೂಲ್‌ನಲ್ಲಿ ಪದವಿ ಪೂರ್ವ ಜೂನಿಯರ್ ಕಾಲೇಜು ಪ್ರಾರಂಭಿಸುವ ಬಗ್ಗೆ.

ಅ) ಹುಕ್ಕೇರಿ ತಾಲ್ಲೂಕಿನ ದಡ್ಡಿಯಲ್ಲಿರುವ ಶ್ರೀಮತಿ ಸುಂದರಾಬಾಯಿ ಬಾಂದುರ್ಗೆ ಹೈಸ್ಕೂಲ್‌ನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳನ್ನು ಪ್ರಾರಂಭಿಸುವ ಬಗ್ಗೆ.

ಇ) ಹುಕ್ಕೇರಿ ತಾಲ್ಲೂಕಿನ ಸಲಾಮವಾಡಿಯಲ್ಲಿರುವ ಘಟಪ್ರಭಾ ಹೈಸ್ಕೂಲ್‌ಗೆ ಮಂಜೂರಾತಿ ನೀಡುವ ಬಗ್ಗೆ ಅರ್ಜಿಗಳನ್ನು ಒಪ್ಪಿಸುತ್ತೇನೆ.

ಅಧ್ಯಕ್ಷರು: ಅರ್ಜಿಗಳನ್ನು ಒಪ್ಪಿಸಲಾಯಿತು.

ವರದಿಯನ್ನೊಪ್ಪಿಸುವುದು

ಶ್ರೀ ಜಿ.ಎಸ್. ಆಚಾರ್: (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ, ವಿಧಾನಸಭೆ):–

ಮಾನ್ಯ ಅಧ್ಯಕ್ಷರೇ, ಕರ್ನಾಟಕ ವಿಧಾನ ಸಭೆಯ, ಸರ್ಕಾರಿ ಭರವಸೆಗಳ ಸಮಿತಿಯ ಮೊದಲನೆಯ ವರದಿಯನ್ನು, 9ನೇ ವಿಧಾನ ಸಭೆಯ ಮುಂದೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ವರದಿಯನ್ನು ಒಪ್ಪಿಸಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ: ಮಾನ್ಯ ಅಧ್ಯಕ್ಷರೇ, ನಾನು ಅತ್ಯಂತ ಪ್ರಮುಖವಾದ ವಿಷಯದ ಬಗ್ಗೆ ಒಂದು ನಿಲುವಳಿ ಸೂಚನೆಯನ್ನು ಕಳುಹಿಸಿಕೊಟ್ಟಿದ್ದೆ ಸರ್ಕಾರ ಡಿ.ಎಲ್.ಆರ್.ಸಿ. ಮೂಲಕ ನೇಮಕಾತಿಯನ್ನು